# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 644 (716) |
| ಸದಸ್ಯರ ಹೆಸರು | : | ಶ್ರೀ ಸಿ.ಎನ್. ಮಂಜೇಗೌಡ (ಸ್ಥ.ಸಂ.ಕ್ಷೇ.ಚು) |
| ಉತ್ತರಿಸಬೇಕಾದ ದಿನಾಂಕ | : | 21.08.2026 |
| ಉತ್ತರಿಸುವ ಸಚಿವರು | : | ಮಾನ್ಯ ಜಲಸಂಪನ್ಮೂಲ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೃಷ್ಣಾ ಭಾಗ್ಯ ಕರ್ನಾಟಕ, ಕಾವೇರಿ ಮತ್ತು ವಿಶ್ವೇಶ್ವರಯ್ಯ ನೀರಾವರಿ ನಿಗಮಗಳ ವ್ಯಾಪ್ತಿಯ 350ಕ್ಕೂ ಹೆಚ್ಚು ಏತ ನೀರಾವರಿ ಯೋಜನೆಗಳಿಂದ ಎಸ್ಕಾಂಗಳಿಗೆ ಅಂದಾಜು ರೂ.5,000 ಕೋಟಿ ವಿದ್ಯುತ್ ಬಿಲ್ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಜಲಸಂಪನ್ಮೂಲ ಇಲಾಖೆಯ ವಿವಿಧ ನಿಗಮಗಳಾದ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ (KBJNL), ಕರ್ನಾಟಕ ನೀರಾವರಿ ನಿಗಮ ನಿಯಮಿತ (KNNL), ಕಾವೇರಿ ನೀರಾವರಿ ನಿಗಮ ನಿಯಮಿತ (CNNL) ಮತ್ತು ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ (VJNL) ಗಳಡಿ ಕಾರ್ಯನಿರ್ವಹಿಸುತ್ತಿರುವ ಏತ ನೀರಾವರಿ ಯೋಜನೆ/ ಕೆರೆ ತುಂಬಿಸುವ ಯೋಜನೆಗಳಿಗೆ ಸಂಬಂಧಿಸಿದಂತೆ ಜುಲೈ 2026 ರ ಅಂತ್ಯಕ್ಕೆ ರೂ.2370.62 ಕೋಟಿ ಮೊತ್ತವು ವಿದ್ಯುತ್ ಬಿಲ್ಲುಗಳ ಪಾವತಿಗೆ ಬಾಕಿ ಇರುತ್ತದೆ. |
| ಆ) | ವಿದ್ಯುತ್ ಬಾಕಿ ನೆಪದಲ್ಲಿ ಎಸ್ಕಾಂಗಳು ಏತ ನೀರಾವರಿ ಯೋಜನೆಗಳ ವಿದ್ಯುತ್ ಸಂಪರ್ಕ ಕಡಿತಗೊಳಿಸಿ ಕೆರೆ ತುಂಬಿಸುವ ಪ್ರಕ್ರಿಯೆಗೆ ತೊಡಕಾಗುತ್ತಿರುವುದನ್ನು ತಡೆಯಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು; | ನಿಗಮಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಏತ ನೀರಾವರಿ ಯೋಜನೆ/ ಕೆರೆ ತುಂಬಿಸುವ ಯೋಜನೆಗಳ ವಿದ್ಯುತ್ ಸಂಪರ್ಕ ಕಡಿತಗೊಂಡು ತೊಡಕಾಗಿರುವ ಪ್ರಕರಣಗಳು ವರದಿಯಾಗಿರುವುದಿಲ್ಲ. |
| ಇ) | ಈ ಯೋಜನೆಗಳ ವಿದ್ಯುತ್ ಶುಲ್ಕ ಪಾವತಿಗೆ ನಿಯಮಿತ ಅನುದಾನವಿಲ್ಲದಿರಲು ಕಾರಣವೇನು ಹಾಗೂ ಬಾಕಿ ತೀರಿಸಲು ಜಲಸಂಪನ್ಮೂಲ ಮತ್ತು ಇಂಧನ ಇಲಾಖೆಗಳು ರೂಪಿಸಿರುವ ಜಂಟಿ ಯೋಜನೆಯೇನು; | ಜಲಸಂಪನ್ಮೂಲ ಇಲಾಖೆಯಡಿ ಬರುವ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಕಾವೇರಿ ನೀರಾವರಿ ನಿಗಮ ನಿಯಮಿತ ಮತ್ತು ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತಗಳನ್ನು ಒಳಗೊಂಡ ಜಂಟಿ ಸಹಭಾಗಿತ್ವ ಸಂಸ್ಥೆಯಾದ ಕರ್ನಾಟಕ ನೀರಾವರಿ ಸೌರ ಯೋಜನೆ ನಿಯಮಿತ ಸ್ಥಾಪಿಸಲಾಗಿದ್ದು, ಸದರಿ ಸಂಸ್ಥೆಯಡಿ ಜಲಸಂಪನ್ಮೂಲ ಇಲಾಖೆಯ ಮಾಲೀಕತ್ವದಲ್ಲಿರುವ ಭೂಪ್ರದೇಶಗಳಲ್ಲಿ ಸೋಲಾರ್ ಪಾರ್ಕ್ ಸ್ಥಾಪಿಸಿ ಸೌರಶಕ್ತಿಯನ್ನು ಉತ್ಪಾದಿಸುವ ಯೋಜನೆಯನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ. ಕರ್ನಾಟಕ ನೀರಾವರಿ ಸೌರ ಯೋಜನೆ ನಿಯಮಿತವು RESCO ಮಾದರಿಯಲ್ಲಿ ಉದ್ದೇಶಿಸಿರುವ ಭೂ ಸ್ಥಾಪಿತ ಸೌರ ಯೋಜನೆಯನ್ನು Virtual Net Metering Scheme ಅಡಿಯಲ್ಲಿ ಅನುಷ್ಠಾನಗೊಳಿಸಲು ಅನುಮೋದನೆಯನ್ನು ಕೋರಿ ಪ್ರಸ್ತಾವನೆಯನ್ನು ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗಕ್ಕೆ ಸಲ್ಲಿಸಲಾಗಿದ್ದು, ಶೀಘ್ರವಾಗಿ ಅನುಮೋದನೆ ಪಡೆಯಲು ಕ್ರಮ ಜರುಗಿಸಲಾಗುತ್ತಿದೆ.<br><br>ಪ್ರಸ್ತುತ ಕರ್ನಾಟಕ ನೀರಾವರಿ ಸೌರ ಯೋಜನೆ ನಿಯಮಿತವು ಇಂಧನ ಇಲಾಖೆಯ ಸಹಯೋಗದೊಂದಿಗೆ ESCOM ವಾರು RFP ಮತ್ತು PPA ದಾಖಲೆಗಳನ್ನು ತಯಾರಿಸಲಾಗಿದ್ದು, KERC ಗೆ ತೀರುವಳಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಈ) | ಸರ್ಕಾರಿ ಇಲಾಖೆಗಳ ರೂ.12,000ಕೋಟಿ ವಿದ್ಯುತ್ ಬಾಕಿ ಹಿನ್ನೆಲೆಯಲ್ಲಿ ಮುಂಗಡ ಹಣ ಪಾವತಿಸಲು ವಿದ್ಯುತ್ ಪಡೆಯುವ (Prepaid) ವ್ಯವಸ್ಥೆ ಜಾರಿಗೆ ತರಲು ಸರ್ಕಾರ ತೀರ್ಮಾನಿಸಿದೆಯೇ ? | ಈ ರೀತಿಯ ಯಾವುದೇ ಪ್ರಸ್ತಾವನೆ ಸರ್ಕಾರದಲ್ಲಿ ಇರುವುದಿಲ್ಲ. |

**ಜಸಂಇ 94 ಎಂಎಲ್ಎ 2026**

**(ಎನ್.ಚಲುವರಾಯಸ್ವಾಮಿ)**
**ಜಲಸಂಪನ್ಮೂಲ ಸಚಿವರು**